**Revised**

# ದಾವಣಗೆರೆ ವಿಶ್ವವಿದ್ಯಾನಿಲಯ

**ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ, ಶಿವಗಂಗೋತ್ರಿ, ದಾವಣಗೆರೆ-577007**

**ದೂ.ಸಂಖ್ಯೆ: 08192-208420,208104**

ಸಂಖ್ಯೆ:ದಾವಿ:ಪವಿ:ಪಪ್ರ-81:2020-21: 5217 ದಿನಾಂಕ:06-03-2021

**:: ಪರೀಕ್ಷಾ ಪ್ರಕಟಣೆ::**

ವಿಷಯ: ಏಪ್ರಿಲ್-2021ರಲ್ಲಿ ನಡೆಯುವ ವಿವಿಧ ಸ್ನಾತಕೋತ್ತರ ಪದವಿಯ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:22-02-2021

* * * * *

ದಾವಣಗೆರೆ ವಿಶ್ವವಿದ್ಯಾನಿಲಯವು ಪರೀಕ್ಷಾ ಸುಧಾರಣೆಗೆ ಸಂಬಂಧಪಟ್ಟಂತೆ ಮಾಹಿತಿ ತಂತ್ರಜ್ಞಾನವನ್ನು ಬೃಹತ್ ಮಟ್ಟದಲ್ಲಿ ಅಳವಡಿಸುತ್ತಿದೆ. ಈ ಸಂಬಂಧವಾಗಿ ಕಾಲೇಜುಗಳು ಹಾಗೂ ವಿದ್ಯಾರ್ಥಿಗಳಿಗೆ ಮಾಹಿತಿಗಳು/ಸಂದೇಶಗಳನ್ನು Web Portal / Mobile App ಮುಖಾಂತರ ತಲುಪಿಸಲು ನಿರ್ಧರಿಸಿದೆ. ಪರೀಕ್ಷಾ ಶುಲ್ಕವನ್ನು ಈ ಪರೀಕ್ಷೆಯಿಂದ ಡಿಜಿಟಲ್ ಮಾಧ್ಯಮದ ಮೂಲಕ ಸಂದಾಯ ಮಾಡುವುದು ಕಡ್ಡಾಯವಾಗಿದೆ.

ಮೇಲೆ ತಿಳಿಸಿದ ಬದಲಾವಣೆಗಳು ಸ್ನಾತಕೋತ್ತರ ಪದವಿಯ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ಪರೀಕ್ಷೆಗಳು ಏಪ್ರಿಲ್-2021ರ ಮಾಹೆಯಲ್ಲಿ ಪ್ರಾರಂಭವಾಗುತ್ತವೆ. ಲಿಖಿತ ಪರೀಕ್ಷೆಗಳ ವಿವರವಾದ ವೇಳಾಪಟ್ಟಿಯನ್ನು ನಂತರ ಕಳುಹಿಸಲಾಗುವುದು. **(ವೇಳಾಪಟ್ಟಿಯಲ್ಲಿ ನ್ಯೂನ್ಯತೆಗಳಿದ್ದಲ್ಲಿ ಪ್ರಕಟಣೆಯಾದ 03 ದಿನದೊಳಗೆ ಮಾಹಿತಿ ನೀಡುವುದು)**

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಆಯಾ ವಿಭಾಗಗಳ ಮುಖ್ಯಸ್ಥರು/ನಿರ್ದೇಶಕರು/ಸಂಯೋಜನಾಧಿಕಾರಿಗಳು/ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವರು(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

**ತೃತೀಯ** ಸೆಮಿಸ್ಟರ್‌ನ ಹೊಸ ಪಠ್ಯಕ್ರಮದ ಎಂಬಿಎ ವಿದ್ಯಾರ್ಥಿಗಳಿಗೆ ಇಂಟರ್ ಡಿಸಿಪ್ಲಿನರಿ ಎಲೆಕ್ಟಿವ್ (Interdisciplinary Elective paper) ಪತ್ರಿಕೆಗೆ ಮಾತ್ರ ಪರೀಕ್ಷೆ ನಡೆಸಲಾಗುವುದು. ಎಂಬಿಎಗೆ ಸಂಬಂಧಪಟ್ಟ ರೆಗ್ಯುಲರ್ ವಿಷಯಗಳಿಗೆ ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು. ಎಂಬಿಎ ಕೋರ್ಸ್‌ನ ಎಲ್ಲಾ ವಿದ್ಯಾರ್ಥಿಗಳು ಕೂಡ ಕೆಳಕಂಡ ದಿನಾಂಕಗಳಲ್ಲಿಯೇ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು.

ಸ್ನಾತಕೋತ್ತರ ವಿಭಾಗಗಳ ಅಭ್ಯರ್ಥಿಗಳಿಗೆ ಆಯಾ ಅಧ್ಯಯನ ವಿಭಾಗಗಳನ್ನು ಪರೀಕ್ಷಾ ಕೇಂದ್ರಗಳನ್ನಾಗಿ ನಿಗಧಿಪಡಿಸಲಾಗಿದೆ.

ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ದಿನಾಂಕಗಳು

| | |
|---|---|
| 01. ದಂಡ ಶುಲ್ಕ ರಹಿತ | : 10/03/2021 ರಿಂದ 17/03/2021 ರವರೆಗೆ |
| 02. ರೂ.120/- ದಂಡ ಶುಲ್ಕ ಸಹಿತ | : 18/03/2021 ರಿಂದ 19/03/2021 ರವರೆಗೆ |
| 03. ರೂ..600/- ದಂಡ ಶುಲ್ಕ ಸಹಿತ | : 20/03/2021 |

ಸ್ನಾತಕೋತ್ತರ ಸೆಮಿಸ್ಟರ್ ಸ್ಕೀಂನ ಪರೀಕ್ಷೆಗಳು

**ವೃತ್ತಿಪರ ಕೋರ್ಸ್‌ಗಳಿಗೆ ಮಾತ್ರ**

(Chemistry/M.B.A/M.Ed/M.P.Ed)

| | | ಪರೀಕ್ಷಾ ಶುಲ್ಕ | ಅಂಕಪಟ್ಟಿಯ ಶುಲ್ಕ | ಒಟ್ಟು |
|---|---|---|---|---|
| 01 | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ (ಪ್ರತ್ಯೇಕವಾಗಿ) | ರೂ.1740/- | ರೂ.165/- | ರೂ.1905/- |
| 02 | ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ಥಿಯರಿ) | ರೂ.340/- | ---- | ರೂ.340/- |
| 03 | ಸೆಮಿಸ್ಟರ್ ಒಂದು ಪ್ರಾಕ್ಟಿಕಲ್ ಪರೀಕ್ಷೆಗೆ | ರೂ.340/- | ---- | ರೂ.340/- |

ಸ್ನಾತಕೋತ್ತರ ಸೆಮಿಸ್ಟರ್ ಸ್ಕೀಂನ ಪರೀಕ್ಷೆಗಳು

**ವೃತ್ತಿಪರವಲ್ಲದ ಕೋರ್ಸ್‌ಗಳಿಗೆ ಮಾತ್ರ**

| | | ಪರೀಕ್ಷಾ ಶುಲ್ಕ | ಅಂಕಪಟ್ಟಿಯ ಶುಲ್ಕ | ಒಟ್ಟು |
|---|---|---|---|---|
| 01 | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ.1540/- | ರೂ.165/- | ರೂ.1705/- |
| 02 | ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ಥಿಯರಿ) | ರೂ.340/- | ---- | ರೂ.340/- |
| 03 | ಸೆಮಿಸ್ಟರ್ ಒಂದು ಪ್ರಾಕ್ಟಿಕಲ್ ಪರೀಕ್ಷೆಗೆ | ರೂ.340/- | ---- | ರೂ.340/- |
| **ಅನುತ್ತೀರ್ಣ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ)** | | | **ಸಾಮಾನ್ಯ (ರೂ)** | **ಪ.ಜಾ/ಪ.ಪಂ/ ಪ್ರವರ್ಗ-1(ರೂ)** |
| | | | ರೂ.100/- | ರೂ.100/- |
| **P.G. Diploma in Rural Governance, Technology & Sustainable Development/Diploma in Digital Media/PGD Clinical Dietics** | | | | |
| 01 | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ.1540/- | ರೂ.165/- | ರೂ.1705/- |
| 02 | ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ಥಿಯರಿ) | ರೂ.340/- | ರೂ.165/- | ರೂ.505/- |

**: : ವಿದ್ಯಾರ್ಥಿಗಳಿಗೆ ಸೂಚನೆ : :**

1. **ವಿದ್ಯಾರ್ಥಿಗಳು Online ಮುಖಾಂತರ ಅರ್ಜಿ ಸಲ್ಲಿಸಲು studentportal.universitysolutions.in ನಲ್ಲಿ login ಆಗಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಬೇಕು.**
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿಮಾಡುವುದಕ್ಕೆ ಮುಂಚಿತವಾಗಿ ಎಲ್ಲಾ ಮಾಹಿತಿಗಳ ನಿಖರತೆಯನ್ನು ಖಾತರಿಪಡಿಸಿಕೊಳ್ಳಬೇಕು.
3. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಪ್ರಥಮ ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ಎಲ್ಲಾ ವಿಷಯಗಳನ್ನು ಖಡ್ಡಾಯವಾಗಿ ತೆಗೆದುಕೊಳ್ಳುವುದು.
4. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಮರು ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ವಿಷಯಗಳ ಆಯ್ಕೆಯು ವಿದ್ಯಾರ್ಥಿಗೆ ಇರುವುದು.
5. ವಿದ್ಯಾರ್ಥಿಗಳು ಪ್ರವೇಶ ಶುಲ್ಕ ಪಾವತಿಸುವುದಕ್ಕೆ ಮುಂಚಿತವಾಗಿ ಪರೀಕ್ಷೆ ಬರೆಯಬೇಕಾದ ವಿಷಯಗಳನ್ನು ಖಚಿತ ಪಡಿಸಿಕೊಳ್ಳುವುದು.
6. ವಿದ್ಯಾರ್ಥಿಗಳಿಗೆ ಪರೀಕ್ಷೆ ಶುಲ್ಕವನ್ನು ಪಾವತಿ ಮಾಡಲು ಈ ಕೆಳಗಿನ ವಿಧಾನವನ್ನು ಒದಗಿಸಲಾಗಿದೆ.
   - ವಿದ್ಯಾರ್ಥಿಯು Web Portal ಮುಖಾಂತರ Payment Gateway ಸೌಲಭ್ಯವನ್ನು ಬಳಸಿಕೊಂಡು (Debit Card / Credit Card / Net Banking / Wallet, ಇತ್ಯಾದಿ) ಹಣ ಪಾವತಿಸಬಹುದು. ಈ ವಿಧಾನದಲ್ಲಿ ಸೇವಾ ಶುಲ್ಕವಿರುತ್ತದೆ.
7. ವಿದ್ಯಾರ್ಥಿಗಳು ತಮ್ಮ Web Portal ನಿಂದ ಪರೀಕ್ಷಾ ಪ್ರವೇಶ ಪತ್ರಿಕೆಯನ್ನು ಸ್ವತಃ ಪಡೆಯಬಹುದು.
8. ಪರೀಕ್ಷಾ ಶುಲ್ಕವನ್ನು ಪಾವತಿ ಮಾಡಿದ ತಕ್ಷಣ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ಬರೆಯುವ ಅರ್ಹತೆ ಇದೆಯೆಂದು ಪರಿಗಣಿಸಲಾಗುವುದಿಲ್ಲ.

**ವಿಶೇಷ ಸೂಚನೆ: ವಿದ್ಯಾರ್ಥಿಗಳು Internet Browsing centerನ ಮಾಲಿಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾನಿಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು.**

9. ಪರೀಕ್ಷಾ ಶುಲ್ಕಗಳ ಜೊತೆಗೆ ಅಂಕಪಟ್ಟಿ ಶುಲ್ಕ ರೂ.165/-ನ್ನು ಪ್ರತಿ ಸೆಮಿಸ್ಟರ್‌ಗೆ ಪ್ರತ್ಯೇಕವಾಗಿ ಪಾವತಿಸಬೇಕು. (ಅರ್ಜಿ ಶುಲ್ಕ

ಪಾವತಿಸಬೇಕಾಗಿಲ್ಲ)

10. (ಅ) ರೂ. 2,50,000 ಲಕ್ಷಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ (ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಮಾತ್ರ) ನಿಯಮಾನುಸಾರ ಪರೀಕ್ಷಾ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಇಂತಹ ವಿದ್ಯಾರ್ಥಿಗಳು ಅಂಕಪಟ್ಟಿ ಶುಲ್ಕ ರೂ.165-00ನ್ನು ಪಾವತಿಸಬೇಕು.

(ಆ) ಇತರ ಎಲ್ಲಾ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು (2ಎ, 3ಎ, 3ಬಿ ಇತ್ಯಾದಿ) ನಿಗಧಿತ ಪರೀಕ್ಷಾ ಶುಲ್ಕ ಪಾವತಿಸಬೇಕು. ಇವರುಗಳಿಗೆ ಶುಲ್ಕ ವಿನಾಯಿತಿ ಇರುವುದಿಲ್ಲ. ಆದರೆ ವಿದ್ಯಾರ್ಥಿಗಳು ತಾವು ವ್ಯಾಸಂಗ ಮಾಡಿದ ಕಾಲೇಜು/ವಿಭಾಗ ಮೂಲಕ ಅರ್ಜಿ ಪಡೆದು ಭರ್ತಿ ಮಾಡಿ ಪ್ರಾಚಾರ್ಯರ ಮೂಲಕ ಕ್ರೋಢೀಕೃತ ಅರ್ಜಿಯನ್ನು ಜಿಲ್ಲಾಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಇವರಿಗೆ ಸಲ್ಲಿಸಿ ಮರುಭರಿಕೆ ಮಾಡಿಕೊಳ್ಳಲು ಅವಕಾಶವಿದೆ.

(ಇ) ರೂ.2,50,000 ಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯ ಹೊಂದಿರುವ ಪ್ರವರ್ಗ-1ರ Fresherss ವಿದ್ಯಾರ್ಥಿಗಳು ಹಾಗೂ ರೂ,1,00,000/-ಕ್ಕಿಂತ ಕಡಿಮೆ ಆದಾಯ ಹೊಂದಿರುವ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು 2ಎ,3ಎ,3ಬಿ ಸೇರಿದ Freshers ವಿದ್ಯಾರ್ಥಿಗಳಿಗೆ ನಿಯಮಾನುಸಾರ ಪರೀಕ್ಷಾ ಶುಲ್ಕ ವಿನಾಯ್ತಿ ಇರುತ್ತದೆ.ಆದರೆ ಅಂತಹ ವಿದ್ಯಾರ್ಥಿಗಳು ಹಿಂದಿನ ಸೆಮಿಸ್ಟರ್ /ವರ್ಷದಲ್ಲಿ ಎಲ್ಲಾ ವಿಷಯಗಳಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗಿರಬೇಕು. ಅಂತಹ ವಿದ್ಯಾರ್ಥಿಗಳು ಅಂಕಪಟ್ಟಿ ಶುಲ್ಕ ರೂ.165/- (ಒಂದು ನೂರ ಅರವತ್ತೈದು) ನ್ನು ಮಾತ್ರ ಪಾವತಿಸಬೇಕು. ಮಾಹಿತಿಗಾಗಿ ಸರ್ಕಾರಿ ಆದೇಶದ ಪ್ರತಿಯನ್ನು ದಾವಣಗೆರೆ ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಈ ಹಿಂದೆ ಪ್ರಕಟಿಸಲಾಗಿರುತ್ತದೆ.

(ಈ)ಹಿಂದಿನ ಸೆಮಿಸ್ಟರ್ ನಲ್ಲಿ ಫೇಲಾದ ವಿದ್ಯಾರ್ಥಿಗಳು 3ನೇ ಸೆಮಿಸ್ಟರನಲ್ಲಿ SC/ST ವಿದ್ಯಾರ್ಥಿಗಳಿಗೆ ಹೊರತು ಪಡಿಸಿ ಉಳಿದ ಎಲ್ಲಾ ವಿದ್ಯಾರ್ಥಿಗಳು ಪೂರ್ಣ ಶುಲ್ಕ ಪಾವತಿಸಬೇಕು ಫೇಲಾದ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿಗೆ ಅವಕಾಶ ಇರುವುದಿಲ್ಲಾ.

(ಉ)ಪ್ರವರ್ಗ 2ಬಿ ಗೆ ಸೇರಿದ ಅಲ್ಪ ಸಂಖ್ಯಾತ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ವಿನಾಯಿತಿ ಇರುವುದಿಲ್ಲ ಈ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಲೇಬೇಕು. ಕಾರಣ ಕರ್ನಾಟಕ ಸರ್ಕಾರ ಆದೇಶ ಸಂಖ್ಯೆ:ಎಂಡಬ್ಲ್ಯುಡಿ:400:ಎಂಡಿಎಸ್-2014 ದಿನಾಂಕ:17-10-2014 ಇಲಾಖೆ,ಬೆಂಗಳೂರು. ಈ ಆದೇಶದಲ್ಲಿ ಶುಲ್ಕ ವಿನಾಯಿತಿಯನ್ನು ನೇರವಾಗಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದೆಂದು ತಿಳಿಸಿರುತ್ತಾರೆ.

(ಊ)ಪರಿಶಿಷ್ಟಜಾತಿ:ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮರು ಯತ್ನದ ವಿದ್ಯಾರ್ಥಿಗಳಿಗೆ ಮತ್ತು ರೂ.600 ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಇರುವುದಿಲ್ಲ.

11. ಸವಾಲಿನ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಕೂಡ ನಿಗಧಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.

12. ಶುಲ್ಕ ವಿನಾಯಿತಿ ಬಯಸುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ವಿಭಾಗ/ ಕಾಲೇಜಿಗೆ ಪರೀಕ್ಷಾ ಅರ್ಜಿಯೊಂದಿಗೆ ಲಗತ್ತಿಸಬೇಕು.

13. ಅಭ್ಯರ್ಥಿಯು ತೆಗೆದುಕೊಳ್ಳಲಿರುವ ಪತ್ರಿಕೆಯ ಕೋಡ್ ಹಾಗೂ ಶೀರ್ಷಿಕೆಯನ್ನು (Subject Title) ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸಬೇಕು.

14. ವಿದ್ಯಾರ್ಥಿಗಳು ಪರೀಕ್ಷೆಗೆ ಕಟ್ಟುವ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರು ಪಾವತಿ ಮಾಡುವುದಿಲ್ಲ.

15. (ಅ) ಏಪ್ರಿಲ್-2021ರಲ್ಲಿ ನಡೆಯಲಿರುವ ಈ ಪರೀಕ್ಷೆಗಳು ಬೆಸ ಸೆಮಿಸ್ಟರ್ ಪರೀಕ್ಷೆಗಳಾಗಿದ್ದು, ಸಮ ಸೆಮಿಸ್ಟರ್‌ನ ಅನುತ್ತೀರ್ಣ ಪತ್ರಿಕೆಗಳನ್ನು ಬೆಸ ಸೆಮಿಸ್ಟರ್ ಪತ್ರಿಕೆಗಳೊಂದಿಗೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.

(ಆ)ನಾಲ್ಕನೇ ಸೆಮಿಸ್ಟರ್ ಪೂರ್ಣಗೊಳಿಸಿದ ವಿದ್ಯಾರ್ಥಿಗಳು ಸಮ ಸೆಮಿಸ್ಟರ್‌ನಲ್ಲಿ ಅನುತ್ತೀರ್ಣಗೊಂಡ ವಿಷಯಗಳನ್ನು ಸಮ ಸೆಮಿಸ್ಟರ್‌ನಲ್ಲಿಯೂ, ಬೆಸ ಸೆಮಿಸ್ಟರ್‌ನಲ್ಲಿ ಅನುತ್ತೀರ್ಣಗೊಂಡ ವಿಷಯಗಳನ್ನು ಬೆಸ ಸೆಮಿಸ್ಟರ್‌ನಲ್ಲಿ ಮಾತ್ರ ಪರೀಕ್ಷೆ ತೆಗೆದುಕೊಳ್ಳಲು ಪ್ರಸ್ತುತ ಶುಲ್ಕದೊಂದಿಗೆ ಅನುಮತಿ ನೀಡಲಾಗಿದೆ. (ಈ ಹಿಂದೆ ನಾಲ್ಕನೇ ಸೆಮಿಸ್ಟರ್ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಸಮ ಅಥವಾ ಬೆಸ ಸೆಮಿಸ್ಟರ್‌ನಲ್ಲಿ ಅನುತ್ತೀರ್ಣಗೊಂಡ ವಿಷಯಗಳನ್ನು ವಿಶೇಷ ಶುಲ್ಕದೊಂದಿಗೆ ತೆಗೆದುಕೊಳ್ಳಲು ನೀಡಲಾದ ಅನುಮತಿಯನ್ನು ನವೆಂಬರ್/ಡಿಸೆಂಬರ್-2017ರ ಪರೀಕ್ಷೆಯಿಂದ ರದ್ದುಪಡಿಸಲಾಗಿದೆ).

(ಇ) ಈ ಅವಕಾಶವು ಸದರಿ ಕೋರ್ಸಿನ ಎರಡರಷ್ಟು ಅವಧಿಗೆ (Double the Duration) ಮಾತ್ರ ಅನ್ವಯಿಸುತ್ತದೆ.

(ಈ) ನವೆಂಬರ್ 2017ರಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ Double the Duration ಪ್ರಕಾರ ಅಕ್ಟೋಬರ್-2021ರ ಪರೀಕ್ಷೆ ಕಡೆಯ ಪರೀಕ್ಷೆಯಾಗಿದ್ದು ಡಿಸೆಂಬರ್ 2021ರಿಂದ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.

16. ನಿಯಮಾನುಸಾರ ಫಲಿತಾಂಶ ಪ್ರಕಟಗೊಂಡ 15 ದಿನಗಳೊಳಗಾಗಿ ವಿದ್ಯಾರ್ಥಿಗಳು ಸವಾಲಿನ ಮೌಲ್ಯಮಾಪನಕ್ಕೆ (Challenging Valuation) ರೂ.2200-00ಗಳ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

## -:ಪ್ರಾಚಾರ್ಯರಿಗೆ ಸೂಚನೆಗಳು:-

ಕಾಲೇಜಿನ ಪ್ರಾಂಶುಪಾಲರು ಪರೀಕ್ಷೆಗೆ ಸಂಬಂಧಪಟ್ಟ ಎಲ್ಲಾ ಕಾರ್ಯಗಳನ್ನು Web Portal ಮುಖಾಂತರ ಮಾಡಬೇಕು.

1. ವಿಶ್ವವಿದ್ಯಾನಿಲಯವು ವಿದ್ಯಾರ್ಥಿಗಳಿಗೆ ನೊಂದಣಿ ಸಂಖ್ಯೆ (Register No.) ಹಾಗೂ ಗುರುತಿನ ಸಂಖ್ಯೆ (Student ID) ತಯಾರು ಮಾಡಿ ಕಾಲೇಜುಗಳಿಗೆ ಅಂತರ್ಜಾಲದ ಮುಖಾಂತರ ಕಳುಹಿಸುವುದು.
2. ಕಾಲೇಜಿನ ಪ್ರಾಂಶುಪಾಲರು ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಕಟ್ಟುವುದಕ್ಕಿಂತ ಮುಂಚಿತವಾಗಿ ಎಲ್ಲಾ ರೀತಿಯ ಅರ್ಹತೆಗಳು ಹೊಂದಿದ್ದಾರೆ ಎಂದು ಖಚಿತ ಪಡಿಸಿಕೊಳ್ಳಬೇಕು.
3. ಕಾಲೇಜಿನ ಪ್ರಾಂಶುಪಾಲರು Web Portal ಮುಖಾಂತರ ವಿದ್ಯಾರ್ಥಿಗಳ ಪರೀಕ್ಷೆ ಅರ್ಹತೆಯನ್ನು ದೃಢೀಕರಿಸಬೇಕು.
4. ಕಾಲೇಜಿನ ಪ್ರಾಂಶುಪಾಲರು Web Portal ಮುಖಾಂತರ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ರಿಯಾಯಿತಿಯ ಬಗ್ಗೆ ದೃಢೀಕರಿಸಬೇಕು.
5. ಕಾಲೇಜಿನ ಪ್ರಾಂಶುಪಾಲರು Web Portal ಮುಖಾಂತರ ವಿದ್ಯಾರ್ಥಿಗಳ ಪ್ರವೇಶ ಪತ್ರಿಕೆಯ ತಡೆಯ ಬಗ್ಗೆ ದೃಢೀಕರಿಸಬೇಕು.
6. ಕಾಲೇಜು ದೃಢೀಕರಿಸಿದ ಮಾಹಿತಿಗಳನ್ನು ವಿದ್ಯಾರ್ಥಿಗಳಿಗೆ Web Portal ಮುಖಾಂತರ ತಿಳಿಸಲಾಗುವುದು.
7. ಕಾಲೇಜಿನ ಪ್ರಾಂಶುಪಾಲರು Web Portal ಮುಖಾಂತರ ತಮ್ಮ ಕಾಲೇಜಿನ ಬ್ಯಾಂಕ್ ವಿವರಗಳನ್ನು ಒದಗಿಸಬೇಕು, ಇಲ್ಲವಾದಲ್ಲಿ ವಿದ್ಯಾರ್ಥಿಗಳಿಗೆ ಕಾಲೇಜಿನ ಬ್ಯಾಂಕ್‌ನಲ್ಲಿ ಪರೀಕ್ಷಾ ಶುಲ್ಕ ಪಾವತಿ ಮಾಡಲು ಅವಕಾಶವಿರುವುದಿಲ್ಲ.
8. ಕಾಲೇಜುಗಳಿಗೆ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಮಾಡಿದ ವಿವರಗಳು ಕಾಲೇಜಿನ Web Portal ನಲ್ಲಿ ಲಭ್ಯವಿರುತ್ತದೆ.
9. ಕಾಲೇಜಿನ ಬ್ಯಾಂಕ್‌ನಲ್ಲಿ ವಿದ್ಯಾರ್ಥಿಗಳು ಸಂದಾಯ ಮಾಡಿದ ಪರೀಕ್ಷಾ ಶುಲ್ಕವನ್ನು ನಿಗದಿತ ದಿನಾಂಕದೊಳಗೆ Payment Gateway ಮುಖಾಂತರ ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕು.
10. ವಿಶ್ವವಿದ್ಯಾನಿಲಯವು ಪರೀಕ್ಷಾ ಪ್ರವೇಶ ಪತ್ರಿಕೆಯನ್ನು ಅಂತರ್‌ಜಾಲದ ಮುಖಾಂತರವೇ ವಿದ್ಯಾರ್ಥಿಗಳಿಗೆ ಒದಗಿಸುವುದು.
11. ಅವಶ್ಯವಿದ್ದ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪರೀಕ್ಷಾ ಪ್ರವೇಶ ಪತ್ರಿಕೆಯನ್ನು ಕಾಲೇಜುಗಳು ಮುದ್ರಿಸಿ ಒದಗಿಸತಕ್ಕದ್ದು.
12. ವಿಶ್ವವಿದ್ಯಾನಿಲಯವು ಕಾಲೇಜುಗಳಿಗೆ ಒದಗಿಸುವ ಪ್ರಶ್ನೆ ಪತ್ರಿಕೆಗಳ ಸಂಖ್ಯೆಯನ್ನು Web Portal ಮುಖಾಂತರ ತಿಳಿಸುವುದು.ಕಾಲೇಜುಗಳು ಇದನ್ನು ಪರಿಶೀಲಿಸಿ ಯಾವುದಾದರು ವ್ಯತ್ಯಯವಿದ್ದರೆ ಅದನ್ನು ವಿಶ್ವವಿದ್ಯಾನಿಲಯದ ಅಧಿಕಾರಿಗಳ ಗಮನಕ್ಕೆ ತರುವುದು.
13. ಕಾಲೇಜಿಗೆ ಸಂಬಂಧಪಟ್ಟ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳ ಪಟ್ಟಿಯನ್ನು Web Portal ಮುಖಾಂತರ ಒದಗಿಸಲಾಗುವುದು.
14. ಪ್ರಾಯೋಗಿಕ ಪರೀಕ್ಷೆಯ ತಯಾರಿಯನ್ನು ಕಾಲೇಜಿನ Web Portal ಮುಖಾಂತರವೇ ಮಾಡುವುದು.
15. ಪ್ರಾಯೋಗಿಕ ಪರೀಕ್ಷೆಯ Batch Preparation ಹಾಗೂ ಅಂಕಗಳ ದಾಖಲಾತಿಯನ್ನು Web Portal ಮುಖಾಂತರವೇ ಮಾಡುವುದು.
16. ಪರೀಕ್ಷಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಕೊಠಡಿಗಳನ್ನು (Room Allotment) ಆನ್‌ಲೈನ್ ಮೂಲಕ ನಿಗದಿಪಡಿಸಿಕೊಳ್ಳುವುದು.
17. Invigilator Dairy ಯನ್ನು (02 ಪ್ರತಿಗಳು) ಆನ್‌ಲೈನ್ ಮೂಲಕವೇ ಸಿದ್ಧಪಡಿಸಿಕೊಳ್ಳಬೇಕು ಹಾಗೂ ಆಯಾ ದಿನದ ಉತ್ತರ ಪತ್ರಿಕೆ ಬಂಡಲ್ ಗಳ ಜೊತೆಯಲ್ಲಿಯೇ 01 ಪ್ರತಿಯನ್ನು ಕಳುಹಿಸಿಕೊಡುವುದು.
18. ಪರೀಕ್ಷೆಗೆ ಗೈರುಹಾಜರಾದ ವಿದ್ಯಾರ್ಥಿಗಳ ನೊಂದಣಿ ಸಂಖ್ಯೆ ಮತ್ತು ವಿಷಯವನ್ನು (QP Code) ಆನ್ ಲೈನ್ ಮೂಲಕವೇ ನಮೂದಿಸುವುದು.
19. ಪ್ರಾಚಾರ್ಯರುಗಳು ಪರೀಕ್ಷಾ ಶುಲ್ಕ/ಇತರೆ ಶುಲ್ಕಗಳ ಮರುಭರಿಕೆಗೆ ಸಂಬಂಧಿಸಿದಂತೆ, ಸರ್ಕಾರಿ **ಆದೇಶ ಸಂಖ್ಯೆ:ಹಿವಿಕ:589: ಬಿಎಂಎಸ್:2013:ಇಲಾಖೆ,ಬೆಂಗಳೂರು.ಇವರದಿನಾಂಕ:05-10-2013ರಪ್ರಕಾರ**ವಿದ್ಯಾರ್ಥಿಗಳಿಗೆಶುಲ್ಕಮರುಭರಿಕೆಗೆ ಕ್ರಮ ಕೈಗೊಳ್ಳತಕ್ಕದ್ದು.
20. ಪ್ರಾಚಾರ್ಯರುಗಳು ಪರೀಕ್ಷಾ ಶುಲ್ಕ/ ಇತರ ಶುಲ್ಕಗಳ ಮರುಭರಿಕೆಗೆ ಸಂಬಂಧಿಸಿದಂತೆ, **ಆಯುಕ್ತರ ಕಛೇರಿಹಿಂದುಳಿದ ವರ್ಗಗಳಕಲ್ಯಾಣ ಇಲಾಖೆ, ಬೆಂಗಳೂರು.ಇವರ ಸಂಖೆ:ಹಿಂವಕಇ/ಶುವಿ/ಸಿ.ಆರ್-34:2014-15ದಿನಾಂಕ:19-09-2014ರ ಪ್ರಕಾರ** ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಶುಲ್ಕಮರುಭರಿಕೆ ಹಣವನ್ನು ಪ್ರಾಚಾರ್ಯರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದೆಂದು ತಿಳಿಸಿರುತ್ತಾರೆ. ಆದ್ದರಿಂದ ಶುಲ್ಕಮರುಭರಿಕೆಯಾದ ನಂತರ ಸದರಿ ಮೊತ್ತವನ್ನು ದಾವಣಗೆರೆ ವಿಶ್ವವಿದ್ಯಾನಿಲಯ ಖಾತೆಗೆ ಜಮಾ ಮಾಡಲು ಕ್ರಮ ಕೈಗೊಳ್ಳತ್ತಕ್ಕದ್ದು.
21. **ಪರೀಕ್ಷಾ ಶುಲ್ಕ ವಿನಾಯ್ತಿ ಪಡೆದ (ಪ್ರವರ್ಗ-1,2ಎ,3ಎ,3ಬಿ), ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳ ಪಟ್ಟಿಯನ್ನು Web Portal ಮುಖಾಂತರ ಸಿದ್ಧಪಡಿಸಿ ಈ ಕಛೇರಿಗೆ ಸಲ್ಲಿಸತ್ತಕ್ಕದ್ದು,**
22. ನಿಯಮಾನುಸಾರ ವಿಶ್ವವಿದ್ಯಾನಿಲಯವು ಅನುಮೋದನೆ ನೀಡಿರುವ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು.

23. **ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ** ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪ್ರಾಚಾರ್ಯರು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಸರ್ಕಾರ ನೀಡುವ ವಿದ್ಯಾರ್ಥಿ ವೇತನದಲ್ಲಿ ಕಡ್ಡಾಯವಾಗಿ ಕಟಾಯಿಸಿ ಎಲ್ಲಾ ವಿವರಗಳೊಂದಿಗೆ ವಿಶ್ವವಿದ್ಯಾನಿಲಯದ ನಿಧಿಗೆ Payment Gateway ಮುಖಾಂತರ ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕು.
24. ಹೆಚ್ಚಿನ ಕಾಲೇಜುಗಳು ಕಳೆದ ಸಾಲಿನ ಪರೀಕ್ಷಾ ಶುಲ್ಕಗಳನ್ನು ಪಾವತಿಸದಿರುವುದನ್ನು ಗಮನಿಸಲಾಗಿದೆ ಆದ್ದರಿಂದ ಈ ಬಾರಿ ತಕ್ಷಣ ಕ್ರಮ ಜರುಗಿಸುವುದು.
25. **ಆಂತರಿಕ ಅಂಕಗಳ ಮಾರ್ಕ್ಸ್ ಲೀಸ್ಟ್‌ಗಳನ್ನು ಕಡ್ಡಾಯವಾಗಿ ಸಮರ್ಪಕವಾಗಿ ಪರಿಶೀಲಿಸಿ 26.03.2021 ಮುಂಚೆಯೇ Online ಮುಖಾಂತರ ಸಲ್ಲಿಸಬೇಕು. ಫಲಿತಾಂಶ ನೀಡಿದ ನಂತರ ಯಾವುದೇ ತಿದ್ದುಪಡಿ/ ಮಾರ್ಪಾಡುಗಳಿಗೆ ಅವಕಾಶ ಇರುವುದಿಲ್ಲ.**
26. ಮುದ್ರಿತ ನಮೂನೆಗಳು(ಸೈದ್ಧಾಂತಿಕ/ಪ್ರಾಯೋಗಿಕ) ಹಾಗೂ ಲೇಖನ ಸಾಮಗ್ರಿಗಳ ಬೇಡಿಕೆ ಪಟ್ಟಿಯನ್ನು ಸಹ ದಿನಾಂಕ:24-03-2021 ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.
27. ಪರೀಕ್ಷಾ ಫೀ ಪಾವತಿಸದೇ ಇರುವ ವಿದ್ಯಾರ್ಥಿಗಳನ್ನು ಪರೀಕ್ಷೆ ಬರೆಯಲು ಅನುಮತಿಸಿ ನಂತರದಲ್ಲಿ ಫಲಿತಾಂಶ ಬಾರದ ಬಗ್ಗೆ ದೂರು ನೀಡುವುದನ್ನು ಗಮನಿಸಲಾಗಿದೆ.ಈ ಬಾರಿ ಇಂತಹ ಪ್ರಕರಣಗಳು ಬಾರದಂತೆ ಎಚ್ಚರವಹಿಸಬೇಕು. ಕಾರಣ, ಒಮ್ಮೆ ಪರೀಕ್ಷೆ ಬರೆಸಿದಲ್ಲಿ ಅಭ್ಯರ್ಥಿ ಪಟ್ಟಿಯಲ್ಲಿ ಇಲ್ಲದವರಫಲಿತಾಂಶ ನೀಡಲು ಅವಕಾಶವಿರದಂತೆ ಸಾಫ್ಟ್‌ವೇರ್‌ನಲ್ಲಿ ಮಾರ್ಪಾಡು ಮಾಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳಿಗೆ ಇದನ್ನು ತಿಳಿಸುವುದು.
28. ಪ್ರಸ್ತುತ ಸಾಲಿನಲ್ಲಿ ಪ್ರವೇಶ ಪಡೆದು ಶೈಕ್ಷಣಿಕ ವಿಭಾಗದಿಂದ ಅನುಮೋದನೆಗೊಂಡ ವಿದ್ಯಾರ್ಥಿಗಳನ್ನು ಮಾತ್ರ ಪರೀಕ್ಷೆಗೆ ಹಾಜರು ಪಡಿಸುವ ಹೊಣೆಯು ಕಾಲೇಜಿನ ಪ್ರಾಂಶುಪಾಲರದ್ದಾಗಿರುತ್ತದೆ.ತಪ್ಪಿದಲ್ಲಿ ತಮ್ಮನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತದೆ.
29. ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳ ಪಟ್ಟಿಯನ್ನು (Absentee Statement) ಪ್ರತ್ಯೇಕವಾಗಿ ಆಯಾ ದಿನದಂದೇ ವಿಶ್ವ ವಿದ್ಯಾನಿಲಯಕ್ಕೆ ಕಳುಹಿಸಬೇಕು.

**ನವೆಂಬರ್ 2017ರಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ Double the Duration ಪ್ರಕಾರ ಅಕ್ಟೋಬರ್-2021ರ ಪರೀಕ್ಷೆ ಕಡೆಯ ಪರೀಕ್ಷೆಯಾಗಿದ್ದು ಡಿಸೆಂಬರ್ 2021ರಿಂದ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.**

**ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 6363341215, 6363337901 ಹಾಗೂ 6363351762 ಸಂಪರ್ಕಿಸಬಹುದು.**

ಕುಲಸಚಿವರು (ಪರೀಕ್ಷಾಂಗ)
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ-577002.

ಗೆ,

ದಾವಣಗೆರೆ ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕೋತ್ತರ/ವಿಭಾಗ/ಕಾಲೇಜುಗಳ ಪ್ರಾಚಾರ್ಯರುಗಳಿಗೆ.

ಪ್ರತಿ:

1. ಜಿಲ್ಲಾಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
2. ಆಪ್ತಶಾಖೆ, ಮಾನ್ಯ ಕುಲಪತಿಗಳು, ಕುಲಸಚಿವ(ಆಡಳಿತ), ಕುಲಸಚಿವ(ಪರೀಕ್ಷಾಂಗ), ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
3. ಉಪಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
4. ಅಧೀಕ್ಷಕರು, ವಿಷಯ ನಿರ್ವಾಹಕರುಗಳು, ಪರೀಕ್ಷಾಂಗ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
5. ಕಛೇರಿ ಪ್ರತಿ.